# ನಗರಸಭಾ ಕಾರ್ಯಾಲಯ, ತುಮಕೂರು.

ನಂ.ನಸತು:ದಾಸ್ತಾನು::ಸಿಆರ್/ /2008-09 ದಿನಾಂಕ 17-04-2009

## ಅಲ್ಪಾವಧಿ ಟೆಂಡರ್ ಪ್ರಕಟಣೆ

ನಗರಸಭಾ ವ್ಯಾಪ್ತಿಯಲ್ಲಿ ಮುಂಬರುವ ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರು ಸರಬರಾಜು ಮಾಡಲು ಅಭಾವ ಉಂಟಾಗಬಹುದಾದ ಪ್ರದೇಶಗಳಿಗೆ ಸ್ವಂತ ನೀರಿನ ಮೂಲದಿಂದ ಕುಡಿಯುವ ನೀರನ್ನು ಸಂಗ್ರಹಿಸಿ 5000 ಲೀಟರ್ ಟ್ಯಾಂಕ್‌ಗಳಲ್ಲಿ ಟ್ರಾಕ್ಟರ್ ಮೂಲಕ ಪ್ರತಿಭಾರಿ (ಒಂದು ಟ್ರಿಪ್) ನೀರು ಸರಬರಾಜು ಮಾಡಲು ಟೆಂಡರ್‌ನ್ನು ಆಹ್ವಾನಿಸಲಾಗಿದೆ.

1. ಟೆಂಡರ್ ಫಾರಂ ಬೆಲೆಯೊಂದಿಗೆ ಅರ್ಜಿ ಸಲ್ಲಿಸಬೇಕಾದ ಕೊನೆಯ ದಿನಾಂಕ 17-04-2009 ರಿಂದ 02-05-2009ರವರೆಗೆ ಕಛೇರಿ ವೇಳೆಯಲ್ಲಿ ಅರ್ಜಿ ಶುಲ್ಕವನ್ನು ಪಾವತಿ ಮಾಡಿ ಅರ್ಜಿಯೊಂದಿಗೆ ಲಗತ್ತಿಸಿ ಪೌರಾಯುಕ್ತರು, ನಗರಸಭೆ, ತುಮಕೂರು ರವರಿಗೆ ಸಲ್ಲಿಸಬಹುದಾಗಿದೆ. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.
2. ಖಾಲಿ ಟೆಂಡರ್ ಫಾರಂಗಳನ್ನು ನೀಡುವ ದಿನಾಂಕ 17-04-2009 ರಿಂದ 02-05-2009ರವರೆಗೆ ಕಛೇರಿಯ ವೇಳೆಯಲ್ಲಿ ಅರ್ಹ ಟೆಂಡರ್‌ದಾರರಿಗೆ ಟೆಂಡರ್ ಫಾರಂ ನೀಡಲಾಗುವುದು.
3. ಭರ್ತಿ ಮಾಡಿದ ಫಾರಂಗಳನ್ನು ದಿನಾಂಕ 04-05-2009 ರಂದು 4.00 ಗಂಟೆಯೊಳಗಾಗಿ ಪೌರಾಯುಕ್ತರು, ನಗರಸಭೆ, ತುಮಕೂರು ರವರ ಕೊಠಡಿಯಲ್ಲಿ ಇಟ್ಟಿರುವ ಟೆಂಡರ್ ಬಾಕ್ಸ್‌ನಲ್ಲಿ ಅಥವಾ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ತುಮಕೂರುರವರ ಕೊಠಡಿಯಲ್ಲಿ ಇಟ್ಟಿರುವ ಟೆಂಡರ್ ಬಾಕ್ಸ್‌ನಲ್ಲಿ ಸಲ್ಲಿಸಬಹುದಾಗಿದೆ.
4. ಟೆಂಡರ್ ಫಾರಂಗಳನ್ನು ಸಾಧ್ಯವಾದರೆ ಅದೇ ದಿನಾಂಕ 04-05-2009 ರಂದು ಸಂಜೆ 4.30 ಗಂಟೆಯೊಳಗಾಗಿ ಅಥವಾ ಮುಂದಿನ ಕಛೇರಿ ವೇಳೆಯಲ್ಲಿ ಹಾಜರಿರುವ ಟೆಂಡರ್‌ದಾರರ ಸಮ್ಮುಖದಲ್ಲಿ ತೆರೆಯಲಾಗುವುದು.
5. ಟೆಂಡರ್ ಷರತ್ತುಗಳನ್ನು ಟೆಂಡರ್ ಫಾರಂನಲ್ಲಿ ಹಾಗೂ ತಾಂತ್ರಿಕ ಶಾಖೆಯ ಹಾಗೂ ದಾಸ್ತಾನು ಶಾಖೆಯಲ್ಲಿ ಕಛೇರಿ ವೇಳೆಯಲ್ಲಿ ಪಡೆಯಬಹುದು.

6) ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: www.tumkurcity.gov.in ಹಾಗೂ ನಗರಸಭೆಯ ತಾಂತ್ರಿಕ ಶಾಖೆಯ ಮತ್ತು ದಾಸ್ತಾನು ಶಾಖೆಯಲ್ಲಿ ಕಛೇರಿ ವೇಳೆಯಲ್ಲಿ ಪಡೆಯಬಹುದು.

| ಕ್ರ. ಸಂ. | ಕಾಮಗಾರಿಯ ಹೆಸರು | ಇಎಂಡಿ ಮೊತ್ತ (ರೂ.ಗಳಲ್ಲಿ) | ಅರ್ಹ ದರ್ಜೆ ಗುತ್ತಿಗೆದಾ ರರು | ಟೆಂಡರ್ ಫಾರಂ ಬೆಲೆ+ ತೆರಿಗೆ | ಕಾಮಗಾರಿ ಪೂರ್ಣಗೊಳಿ ಸಲು ಕಾಲಾವಧಿ |
|---|---|---|---|---|---|
| 1 | ನಗರಸಭಾ ವ್ಯಾಪ್ತಿಯಲ್ಲಿ ಮುಂಬರುವ ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರು ಸರಬರಾಜು ಮಾಡಲು ಅಭಾವ ಉಂಟಾಗಬಹುದಾದ ಪ್ರದೇಶಗಳಿಗೆ ಸ್ವಂತ ನೀರಿನ ಮೂಲದಿಂದ ಕುಡಿಯುವ ನೀರನ್ನು ಸಂಗ್ರಹಿಸಿ 5000 ಲೀಟರ್ ಟ್ಯಾಂಕ್‌ಗಳಲ್ಲಿ ಟ್ರಾಕ್ಟರ್ ಮೂಲಕ ಪ್ರತಿಭಾರಿ (ಒಂದು ಟ್ರಿಪ್) ನೀರು ಸರಬರಾಜು ಮಾಡುವುದು. | 10000.00 | 3ನೇ ದರ್ಜೆ ಮೇಲ್ಪಟ್ಟು | 1000+ ತೆರಿಗೆ | 2 ತಿಂಗಳು |

| ಸಹಿ/- | ಸಹಿ/- | ಸಹಿ/- | ಸಹಿ/- |
|---|---|---|---|
| **ಅಧ್ಯಕ್ಷರು** | **ಉಪಾಧ್ಯಕ್ಷರು** | **ಸ್ಥಾಯಿ ಸಮಿತಿ ಅಧ್ಯಕ್ಷರು** | **ಪೌರಾಯುಕ್ತರು** |
| **ನಗರಸಭೆ, ತುಮಕೂರು.** | **ನಗರಸಭೆ, ತುಮಕೂರು.** | **ನಗರಸಭೆ, ತುಮಕೂರು.** | **ನಗರಸಭೆ, ತುಮಕೂರು.** |